ದೂರವಾಣಿ : 080-27835122
ಫ್ಯಾಕ್ಸ್ : 080-27836569

# ಆನೇಕಲ್ ಯೋಜನಾ ಪ್ರಾಧಿಕಾರ

"ಅಣ್ಣ" ನಂ. 430, ಹೆನ್ನಾಗರ ಗೇಟ್, ಹೊಸೂರು ಮುಖ್ಯರಸ್ತೆ, ಬೆಂಗಳೂರು-560 099.

www.anekal.tpa.gov.in, www.e-vinyasa.kar.nic.in

**"ವಸತಿ ಉಪಯೋಗದ ಅಭಿವೃದ್ಧಿ ಯೋಜನಾ ನಕ್ಷೆ ಅನುಮೋದನೆ ಪತ್ರ"** 15 JUL 2022

ವಿಷಯ : ಆನೇಕಲ್ ತಾಲ್ಲೂಕು, ಜಿಗಣಿ ಹೋಬಳಿ, ವಡೇರಮಂಚನಹಳ್ಳಿ ಗ್ರಾಮದ ಸ.ನಂ.15ರಲ್ಲಿನ 03ಎಕರೆ 39ಗುಂಟೆ (16,086.03ಚ.ಮೀ.) ವಿಸ್ತೀರ್ಣದ ಜಮೀನುಗಳಲ್ಲಿ 'ವಸತಿ ಉಪಯೋಗದ ಅಭಿವೃದ್ಧಿ ಯೋಜನಾ ನಕ್ಷೆಗೆ' ಅನುಮೋದನೆ ನೀಡಲು ಕೋರಿರುವ ಬಗ್ಗೆ.

ಉಲ್ಲೇಖ :
1) M/s Swagatham Constructions Private Limited ಪರವಾಗಿ Sri.Vikas B Kukreja ರವರ ಮನವಿ ಪತ್ರ ದಿನಾಂಕ:06.07.2021 ಮತ್ತು 21.03.2022.
2) ಜಿಲ್ಲಾಧಿಕಾರಿಗಳು, ಬೆಂಗಳೂರು ಜಿಲ್ಲೆ ರವರ ಕಛೇರಿ ಅಧಿಕೃತ ಜ್ಞಾಪನ ಪತ್ರ ಸಂ: ಎಎಲ್ಎನ್(ಎಜೆ)ಎಸ್ಆರ್:274:2013-14 ದಿನಾಂಕ:08.05.2014.
3) ದಿನಾಂಕ:18.04.2022ರಂದು ನಡೆದ ಪ್ರಾಧಿಕಾರದ 78ನೇ ಸಭೆಯ ವಿಷಯ ಸಂ. 24ರ ನಡಾವಳಿ.
4) ಅರ್ಜಿದಾರರಿಗೆ ಶುಲ್ಕ ಪಾವತಿಸಲು ತಿಳಿಸಿ ಬರೆದಿರುವ ಈ ಪ್ರಾಧಿಕಾರದ ಸಮ ಸಂಖ್ಯೆಯ ಶುಲ್ಕ ಪಾವತಿ ಸೂಚನಾ ಪತ್ರ ದಿನಾಂಕ:11.08.2021 ಮತ್ತು 01.06.2022.
5) ಅರ್ಜಿದಾರರು ಪ್ರಾಧಿಕಾರಕ್ಕೆ ಉತ್ತಮತೆ, ಪರಿಶೀಲನಾ, ಉಸ್ತುವಾರಿ ಮತ್ತು ನಕ್ಷೆ ಪ್ರತಿ ಶುಲ್ಕಗಳು ಒಟ್ಟು ರೂ.6,64,300/-(ಆರು ಲಕ್ಷದ ಅರವತ್ತನಾಲ್ಕು ಸಾವಿರದ ಮೂರುನೂರು ರೂಪಾಯಿಗಳು ಮಾತ್ರ) ಮತ್ತು ಕೆರೆ ಪುನರುಜ್ಜೀವನ ಶುಲ್ಕ ರೂ.4,02,200/-(ನಾಲ್ಕು ಲಕ್ಷದ ಎರಡು ಸಾವಿರದ ಇನ್ನೂರು ರೂಪಾಯಿಗಳು ಮಾತ್ರ) ಮತ್ತು ಇತರೆ ಸೆಸ್ ಮತ್ತು ಸರ್‌ಚಾರ್ಜ್‌ಗಳು ಶುಲ್ಕಗಳ ಒಟ್ಟು ರೂ.4,83,000/-(ನಾಲ್ಕು ಲಕ್ಷದ ಎಂಬತ್ತಮೂರು ಸಾವಿರ ರೂಪಾಯಿಗಳು ಮಾತ್ರ) ರಂತೆ ಶುಲ್ಕಗಳನ್ನು ಪಾವತಿಸಿರುತ್ತಾರೆ. ರಶೀದಿ ಸಂಖ್ಯೆ:881 ದಿನಾಂಕ: 30.11.2021ರಂತೆ ಪ್ರಾಧಿಕಾರಕ್ಕೆ ಪಾವತಿಸಿರುತ್ತಾರೆ. ಮತ್ತು ಪರಿಶೀಲನಾ ಶುಲ್ಕ ರೂ.17,100/- (ಹದಿನೇಳು ಸಾವಿರದ ನೂರು ರೂಪಾಯಿಗಳು ಮಾತ್ರ) ರಶೀದಿ ಸಂಖ್ಯೆ:1494 ದಿನಾಂಕ:09.06.2022ರಂತೆ ಪ್ರಾಧಿಕಾರಕ್ಕೆ ಪಾವತಿಸಿರುತ್ತಾರೆ.
6) ಅರ್ಜಿದಾರರು 'ವಸತಿ ಉಪಯೋಗದ ಅಭಿವೃದ್ಧಿ ಯೋಜನಾ ನಕ್ಷೆಯಲ್ಲಿ ಉದ್ಯಾನವನಕ್ಕಾಗಿ ಕಾಯ್ದಿರಿಸಿರುವ ಜಾಗವನ್ನು ಈ ಪ್ರಾಧಿಕಾರಕ್ಕೆ ನೋಂದಾಯಿತ ಪರಿತ್ಯಾಜನಾ ಪತ್ರದ ಮುಖಾಂತರ ಹಸ್ತಾಂತರಿಸಿ ಸಲ್ಲಿಸಿರುವ ಮನವಿ ಪತ್ರ ದಿನಾಂಕ:02.07.2022.

***********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, M/s Swagatham Constructions Private Limited ಪರವಾಗಿ Sri.Vikas B Kukreja, ಇವರು ಉಲ್ಲೇಖ(1)ರಂತೆ ಆನೇಕಲ್ ತಾಲ್ಲೂಕು, ಜಿಗಣಿ ಹೋಬಳಿ, ವಡೇರಮಂಚನಹಳ್ಳಿ ಗ್ರಾಮದ ಸ.ನಂ.15ರಲ್ಲಿನ 03ಎಕರೆ 39ಗುಂಟೆ ವಿಸ್ತೀರ್ಣದ ಜಮೀನಿನಲ್ಲಿ 'ವಸತಿ ಉಪಯೋಗದ ಅಭಿವೃದ್ಧಿ ಯೋಜನಾ ನಕ್ಷೆಗೆ' ಅನುಮೋದನೆ ನೀಡಲು ಕೋರಿರುತ್ತಾರೆ.

ಆನೇಕಲ್ ಯೋಜನಾ ಪ್ರಾಧಿಕಾರ ಪ್ರದೇಶ ಸ್ಥಳೀಯ ಯೋಜನಾ ಪ್ರದೇಶದ ಅನುಮೋದಿತ ಮಹಾಯೋಜನೆ-2031ರಂತೆ ಪ್ರಸ್ತಾಪಿತ ಜಮೀನು ವಸತಿ ಭೂ ಉಪಯೋಗ ವಲಯಕ್ಕೆ ಕಾಯ್ದಿರಿಸಲಾಗಿರುತ್ತದೆ. ಉಲ್ಲೇಖ (2) ರ ಅಧಿಕೃತ ಜ್ಞಾಪನ ಪತ್ರಗಳಂತೆ ಜಿಲ್ಲಾಧಿಕಾರಿಗಳು, ಬೆಂಗಳೂರು ಜಿಲ್ಲೆ ರವರಿಂದ 'ವಸತಿ' ಉದ್ದೇಶಕ್ಕಾಗಿ ಭೂ ಪರಿವರ್ತನೆಯಾಗಿರುತ್ತದೆ. ಪ್ರಶ್ನಿತ ಜಮೀನಿಗೆ ಪ್ರಾಧಿಕಾರದಿಂದ ಸಂಖ್ಯೆ:ಆಯೋಪ್ರಾ:ಎಲ್ಎಓ:152:2012-13 ದಿನಾಂಕ: 21.04.2014ರಂತೆ ಅನುಮೋದನೆಯಾಗಿರುವ ವಸತಿ ಬಡಾವಣೆಯ 12.19ಮೀ. ಅಗಲದ ರಸ್ತೆಯಿಂದ ರಸ್ತೆ ಸಂಪರ್ಕ ಹೊಂದಿರುತ್ತದೆ.



Scanned with CamScanner

ವಸತಿ ಉಪಯೋಗದ ಅಭಿವೃದ್ಧಿ ಯೋಜನಾ ನಕ್ಷೆ ಅನುಮೋದನೆ ನೀಡುವ ಸಂಬಂಧ ಉಲ್ಲೇಖ (3) ರ ದಿನಾಂಕ:18.04.2022ರಂದು ನಡೆದ ಪ್ರಾಧಿಕಾರದ 78ನೇ ಸಭೆಯ ವಿಷಯ ಸಂ.24ರಲ್ಲಿ ಮಂಡಿಸಲಾಗಿ, ವಸತಿ ಅಭಿವೃದ್ಧಿ ಯೋಜನಾ ನಕ್ಷೆಯು ವಲಯನಿಯಮಾವಳಿಗಳಿಗೆ ಅನುಗುಣವಾಗಿರುವುದರಿಂದ ಆನೇಕಲ್ ತಾಲ್ಲೂಕು, ಜಿಗಣಿ ಹೋಬಳಿ, ವಡೇರಮಂಚನಹಳ್ಳಿ ಗ್ರಾಮದ ಸ.ನಂ.15ರಲ್ಲಿನ 03ಎಕರೆ 39ಗುಂಟೆ (16,086.03ಚ.ಮೀ.) ವಿಸ್ತೀರ್ಣದ ಪ್ರದೇಶದಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರನ್ವಯ ಹಾಗೂ ವಲಯ ನಿಯಮಾವಳಿಯನ್ವಯ ವಸತಿ ಅಭಿವೃದ್ಧಿ ಯೋಜನಾ ನಕ್ಷೆಗೆ ಅನುಮೋದನೆ ನೀಡಲು ತೀರ್ಮಾನಿಸಲಾಗಿರುತ್ತದೆ.

ಉಲ್ಲೇಖ (4) ರ ಪ್ರಾಧಿಕಾರದ ಪತ್ರದಲ್ಲಿ ಅರ್ಜಿದಾರರಿಗೆ ನಿಗಧಿತ ಶುಲ್ಕಗಳನ್ನು ಪಾವತಿಸುವಂತೆ ತಿಳಿಸಲಾಗಿತ್ತು. ಅದರಂತೆ ಅರ್ಜಿದಾರರು ಉಲ್ಲೇಖ (5) ರಲ್ಲಿ ಈ ಪ್ರಾಧಿಕಾರಕ್ಕೆ ನಿಗಧಿತ ಶುಲ್ಕಗಳನ್ನು ಪಾವತಿಸಿರುತ್ತಾರೆ.

ಉಲ್ಲೇಖ (6) ರಲ್ಲಿ ವಸತಿ ಉಪಯೋಗದ ಅಭಿವೃದ್ಧಿ ಯೋಜನಾ ನಕ್ಷೆಯಲ್ಲಿ ಉದ್ಯಾನವನಕ್ಕಾಗಿ ಕಾಯ್ದಿರಿಸಿರುವ ಜಾಗಗಳನ್ನು ಹಿರಿಯ ಉಪನೋಂದಣಾಧಿಕಾರಿಗಳು, ಬಸವನಗುಡಿ (ಅತ್ತಿಬೆಲೆ) ರವರ ಕಛೇರಿಯ 1 ನೇ ಪುಸ್ತಕದ ದಸ್ತಾವೇಜು ನಂಬರ್ ಎಬಿಎಲ್-1-03861-2022-23 ಆಗಿ ಸಿ.ಡಿ.ನಂಬರ್ ಎಬಿಎಲ್‌ಡಿ1208 ನೇ ದ್ದರಲ್ಲಿ ದಿನಾಂಕ:01.07.2022ರಂದು ನೋಂದಾಯಿಸಿರುವ ಮೂಲ ಪರಿತ್ಯಾಜನಾ ಪತ್ರವನ್ನು ಸಲ್ಲಿಸಿರುತ್ತಾರೆ.

ವಲಯನಿಯಮಾವಳಿಗಳನ್ವಯ ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಅನುಮೋದನೆ ನೀಡಲಾಗಿದೆ.

1) ಪ್ರಾಧಿಕಾರಕ್ಕೆ ಸಂಬಂಧಪಟ್ಟ ಶುಲ್ಕಗಳನ್ನು ಪಾವತಿಸುವುದು.
2) ಕುಡಿಯುವ ನೀರು ಹಾಗೂ ತ್ಯಾಜ್ಯ ನೀರು ವಿಲೇವಾರಿ ಮತ್ತು ಒಳಚರಂಡಿ ವ್ಯವಸ್ಥೆಯನ್ನು ಅರ್ಜಿದಾರರೇ ಕಲ್ಪಿಸುವುದು. ಕುಡಿಯುವ ನೀರು ಪೂರೈಕೆ ಬಗ್ಗೆ ಅರ್ಜಿದಾರರು ಖಾತ್ರಿಪಡಿಸುವುದು.
3) ಅಭಿವೃದ್ಧಿ ಯೋಜನೆಯಲ್ಲಿ ಅರ್ಜಿದಾರರು ಕಡ್ಡಾಯವಾಗಿ ಮಳೆನೀರು ಕೊಯ್ಲಿಗೆ ಸಂಬಂಧಿಸಿದಂತೆ ಪೂರ್ಣ ವಿವರಗಳನ್ನು ನಕ್ಷೆಯಲ್ಲಿ ಗುರುತಿಸಿ ಉದ್ದೇಶಿತ ಒಟ್ಟು ಕ್ಷೇತ್ರದಲ್ಲಿ ಬೀಳುವ ಮಳೆನೀರು ವ್ಯರ್ಥವಾಗಿ ಹೊರಗೆ ಹೋಗದಂತೆ ಉದ್ದೇಶಿತ ಜಮೀನಿನಲ್ಲಿಯೇ ಭೂಮಿಯ ಒಳಗಡೆ ಇಂಗುವಂತೆ ಮಾಡಲು ವಿನ್ಯಾಸವನ್ನು ಸಿದ್ಧಪಡಿಸಿ ಪೂರ್ಣ ವಿವರಗಳನ್ನು ನಕ್ಷೆಯಲ್ಲಿ ಗುರುತಿಸಿ ತೋರಿಸತಕ್ಕದ್ದು.
4) ಪ್ರಾಧಿಕಾರವು ಅನುಮೋದಿಸಿರುವ ಅಭಿವೃದ್ಧಿ ಯೋಜನಾ ನಕ್ಷೆಯಂತೆಯೇ ಅಭಿವೃದ್ಧಿ ಕಾರ್ಯಗಳನ್ನು ಕಾರ್ಯಗತ ಮಾಡುವ ಮುನ್ನ ನಿಗಧಿತ ನಿರಾಕ್ಷೇಪಣಾ ಪತ್ರಗಳನ್ನು ಈ ಪ್ರಾಧಿಕಾರಕ್ಕೆ ಸಲ್ಲಿಸಿ ಪೂರ್ವಾನುಮತಿಯನ್ನು ಕಡ್ಡಾಯವಾಗಿ ಪಡೆಯತಕ್ಕದ್ದು.
5) ಉದ್ಯಾನವನ ಮತ್ತು ಬಯಲು ಜಾಗಗಳನ್ನು ಹಾಗೂ ಸಿ.ಎ. ಜಾಗಗಳನ್ನು ಅನುಮೋದಿತ ನಕ್ಷೆ ಪ್ರಕಾರ ಅಭಿವೃದ್ಧಿಪಡಿಸುವುದು.
6) ಅಭಿವೃದ್ಧಿದಾರರು ಉದ್ಯಾನವನಕ್ಕಾಗಿ ಕಾಯ್ದಿರಿಸಿರುವ ಪ್ರದೇಶದಲ್ಲಿ ವಿವಿಧ ಜಾತಿಯ ಗಿಡಮರಗಳನ್ನು ಬೆಳೆಸಿ ಅಭಿವೃದ್ಧಿಪಡಿಸುವುದು.
7) ಕಟ್ಟಡ ಕಾಮಗಾರಿ ಪ್ರಾರಂಭವಾದ ನಂತರ ಕಟ್ಟಡ ಸುರಕ್ಷತೆಯ ಬಗ್ಗೆ ಸಂಬಂಧಿಸಿದ ಸಕ್ಷಮ ಪ್ರಾಧಿಕಾರದ ಪರಿಶೀಲಿಸಿಕೊಳ್ಳತಕ್ಕದ್ದು.
8) ವಿವರವಾದ ಕಟ್ಟಡ ನಕ್ಷೆಗಳನ್ನು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 15ರ ಅಡಿಯಲ್ಲಿ ಯೋಜನಾ ಪ್ರಾಧಿಕಾರದಿಂದ ಅನುಮೋದಿಸಿಕೊಳ್ಳುವುದು.
9) ವಲಯ ನಿಯಮಾವಳಿಯಂತೆ ವಸತಿ ಅಭಿವೃದ್ಧಿ ಯೋಜನಾ ನಕ್ಷೆಯು ಉದ್ದೇಶಿತ ಕಟ್ಟಡಗಳ ಬ್ಲಾಕ್‌ಗಳು, ಉಪಗಮನ ರಸ್ತೆ, ಹೈವೇಗಳು, ಉದ್ಯಾನವನ ಮತ್ತು ಖಾಲಿ ಜಾಗಗಳು, ನಾಗರೀಕ ಸೌಕರ್ಯ ಜಾಗಗಳನ್ನು ನಿಗದಿಪಡಿಸಿರುವ ನಕ್ಷೆಯಾಗಿದ್ದು ಎಲ್ಲಾ ಅಗತ್ಯ ನಿರಾಕ್ಷೇಪಣಾ ಪತ್ರಗಳನ್ನು ಕಟ್ಟಡ ನಕ್ಷೆ ಅನುಮೋದಿಸುವ ಸಂದರ್ಭದಲ್ಲಿ ಸಲ್ಲಿಸತಕ್ಕದ್ದು.



Scanned with CamScanner

ದೂರವಾಣಿ : 080-27835122
ಫ್ಯಾಕ್ಸ್ : 080-27836569

# ಆನೇಕಲ್ ಯೋಜನಾ ಪ್ರಾಧಿಕಾರ

"ಅಣ್ಣ" ನಂ. 430, ಹೆನ್ನಾಗರ ಗೇಟ್, ಹೊಸೂರು ಮುಖ್ಯರಸ್ತೆ, ಬೆಂಗಳೂರು-560 099.
www.anekal.tpa.gov.in, www.e-vinyasa.kar.nic.in

10) ರಿಯಲ್ ಎಸ್ಟೇಟ್ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ-2016 ರ ಕಲಂ (3) ಮತ್ತು (4) ರ ರೀತ್ಯ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ (RERA) ದಲ್ಲಿ ವಸತಿ ಯೋಜನೆಯ ಪೂರ್ವಭಾವಿ ನೋಂದಣಿಯನ್ನು ಕಡ್ಡಾಯವಾಗಿ ಮಾಡತಕ್ಕದ್ದು.

11) ಪ್ರಸ್ತಾವಿತ ಬಡಾವಣೆಯಲ್ಲಿನ ನಿವೇಶನದಾರರಿಗೆ ನೀರು ಸರಬರಾಜು, STP/ಸೆಪ್ಟಿಕ್ ಟ್ಯಾಂಕ್ ಮುಂತಾದ ಮೂಲಭೂತ ಸೌಕರ್ಯಗಳನ್ನು ಬಡಾವಣೆಯ ಮಾಲೀಕರು ಒದಗಿಸತಕ್ಕದ್ದು.

12) ಅಭಿವೃದ್ಧಿ ಕಾರ್ಯ ಕೈಗೊಳ್ಳುವ ಪೂರ್ವದಲ್ಲಿ ಅಗತ್ಯ ಅಭಿವೃದ್ಧಿ ಶುಲ್ಕವನ್ನು ಯೋಜನಾ ಪ್ರಾಧಿಕಾರಕ್ಕೆ/ಸ್ಥಳೀಯ ಸಂಸ್ಥೆಗೆ ಪಾವತಿಸತಕ್ಕದ್ದು.

13) ಸದರಿ ಪ್ರದೇಶದ ಒಳಗೆ ಹೋಗಲು ಮತ್ತು ಹೊರಗೆ ಬರಲು ಸಂಚಾರ ವ್ಯವಸ್ಥೆಯಲ್ಲಿ ಅಡಚಣೆಯುಂಟಾಗದಂತೆ ವ್ಯವಸ್ಥೆ ಕಲ್ಪಿಸುವುದು. ವಾಹನ ತಪಾಸಣೆಗೆ ಮತ್ತು ಭದ್ರತಾ ವ್ಯವಸ್ಥೆಯನ್ನು ಅಳವಡಿಸಿದಲ್ಲಿ ಸ್ವತ್ತಿನ ಒಳಭಾಗದಲ್ಲಿ ನಿರ್ವಹಿಸುವುದು.

14) ಅಗ್ನಿಶಾಮಕ ಇಲಾಖೆ, ವೈಮಾನಿಕ ಇಲಾಖೆ, ಸ್ಥಳೀಯ ಸಂಸ್ಥೆ, ಬೆಸ್ಕಾಂ ಹಾಗೂ ಕೆ.ಎಸ್.ಪಿ.ಸಿ.ಬಿ. ಮಂಡಳಿ/ಇಲಾಖೆಗಳಿಂದ ನಿರಾಕ್ಷೇಪಣಾ ಪತ್ರಗಳನ್ನು ಪಡೆದು ಯೋಜನಾ ಪ್ರಾಧಿಕಾರಕ್ಕೆ ಸಲ್ಲಿಸಿ ಕಟ್ಟಡ ನಕ್ಷೆಗಳಿಗೆ ಅನುಮೋದನೆ ಪಡೆಯುವುದು.

15) ಅರ್ಜಿದಾರರು ಉದ್ದೇಶಿಸಿರುವ ಜಮೀನಿನಲ್ಲಿ ಸರ್ಕಾರಿ ಅಥವಾ ಅನ್ಯ ಖಾಸಗಿ ಜಮೀನುಗಳೇನಾದರೂ ಸೇರಿಕೊಂಡಿರುವುದು ತಿಳಿದುಬಂದಲ್ಲಿ ಅಂತಹ ಸಂದರ್ಭದಲ್ಲಿ ಯೋಜನಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಅನುಮೋದಿತ ಅಭಿವೃದ್ಧಿ ನಕ್ಷೆಯನ್ನು ಮಾರ್ಪಾಡು ಮಾಡಲು ಅಥವಾ ಹಿಂತೆಗೆದುಕೊಳ್ಳಲು ಅಧಿಕಾರವುಳ್ಳವರಾಗಿರುತ್ತಾರೆ.

16) ಅಭಿವೃದ್ಧಿ ಯೋಜನಾ ನಕ್ಷೆ ಅನುಮೋದನೆ ಸಂಬಂಧ ಜಮೀನಿನ ಮಾಲೀಕತ್ವದ ಬಗ್ಗೆ ಅರ್ಜಿದಾರರು ತಪ್ಪು ಮಾಹಿತಿ/ದಾಖಲಾತಿ ನೀಡಿದ್ದಲ್ಲಿ ಅಭಿವೃದ್ಧಿ ಯೋಜನಾ ನಕ್ಷೆಯ ಅನುಮೋದನೆಯು ತನ್ನಿಂತಾನೇ ರದ್ದಾಗುತ್ತದೆ.

17) ಅಭಿವೃದ್ಧಿ ಯೋಜನೆಯಲ್ಲಿನ ಘನತ್ಯಾಜ್ಯಗಳನ್ನು ಪ್ಲಾಸ್ಟಿಕ್ ಮತ್ತು ಇತ್ಯಾದಿಯಾಗಿ ವಿಂಗಡಿಸಿ, Compost ಮಾಡಲು ಸೂಕ್ತ ಸ್ಥಳವನ್ನು ಕಾಯ್ದಿರಿಸತಕ್ಕದ್ದು.

18) ನೈಸರ್ಗಿಕವಾಗಿ ಹರಿಯುವ ನದಿ/ಹಳ್ಳ/ಕೆರೆ/ನಾಲಾ ಮುಂತಾದವುಗಳಿಗೆ ವಿನ್ಯಾಸದ ಮಲೀನ ನೀರನ್ನು ಬಿಡಬಾರದು. ಸದರಿ ವಸತಿ ವಿನ್ಯಾಸ ನಕ್ಷೆಯಲ್ಲಿ ಸೂಚಿಸಲಾಗಿರುವ ನಾಲಾ ಪ್ರದೇಶಗಳಲ್ಲಿ ರಸ್ತೆ ಪರಿಚಲನೆಯನ್ನು ಮುಂದುವರಿಸುವಾಗ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ಪೂರ್ವಾನುಮತಿ ಪಡೆದು ಕಲ್ವರ್ಟ್/ಸೇತುವೆ ಕಟ್ಟತಕ್ಕದ್ದು, ಹಾಗೂ ನೀರಿನ ಹರಿವೆಗಾಗಿ ಯಾವುದೇ ಅಡಚಣೆ ಮಾಡತಕ್ಕದ್ದಲ್ಲ, ಹಾಗೂ ಸೂಕ್ತ ಡ್ರೈನೇಜ್ ನಿರ್ಮಿಸಿ ಸಂರಕ್ಷಿಸತಕ್ಕದ್ದು, ಹಾಗೂ ಯಾವುದೇ ಒತ್ತುವರಿ ಮಾಡತ್ತಕ್ಕದ್ದಲ್ಲ. ಸರ್ಕಾರದ ಅಧಿಸೂಚನೆ ಸಂ. ಯುಡಿಡಿ15ಟಿಟಿಪಿ2015, ದಿನಾಂಕ:21/04/2020 ರ ರೀತ್ಯ ಜಲ ಪ್ರದೇಶಗಳ ಬಫರ್ ಜಾಗದಲ್ಲಿ water pumping stations, Walking tracks, Play fields without any building constructions, cycling tracks & Parks ಗಳನ್ನು ಮಾತ್ರ ಅಭಿವೃದ್ಧಿಪಡಿಸತಕ್ಕದ್ದು.

19) ಆನೇಕಲ್ ಯೋಜನಾ ಪ್ರದೇಶ ಯೋಜನಾ ಪ್ರಾಧಿಕಾರವು ವಿಧಿಸುವ ಇತರೆ ಷರತ್ತುಗಳಿಗೆ ಬದ್ಧರಾಗಿರುವುದು.



Scanned with CamScanner

ಮೇಲಿನಂತೆ ನೀಡಲಾಗಿರುವ ಅನುಮತಿಗೆ ವ್ಯತಿರಿಕ್ತವಾಗಿ ಅಬಿವೃದ್ಧಿ ಕಾಮಗಾರಿಯನ್ನು ಕೈಗೊಂಡಲ್ಲಿ, ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರಂತೆ ಕ್ರಮ ಕೈಗೊಳ್ಳಲು ಅವಕಾಶ ಇರುವುದನ್ನು ನಿಮ್ಮ ಗಮನಕ್ಕೆ ತರಲಾಗಿದೆ.

15-7-22

ಸದಸ್ಯ ಕಾರ್ಯದರ್ಶಿಗಳು ಹಾಗೂ ನಗರ ಮತ್ತು
ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು,
ಆನೇಕಲ್ ಯೋಜನಾ ಪ್ರಾಧಿಕಾರ,
ಆನೇಕಲ್.

ರವರಿಗೆ,
M/s Swagatham Constructions Private Limited
ಪರವಾಗಿ Sri.Vikas B Kukreja,
ನಂ.77, 2ನೇ ಮೈನ್, ಮೊದಲನೇ ಬ್ಲಾಕ್,
ಕೋರಮಂಗಲ, ಬೆಂಗಳೂರು-560 034.

ಪ್ರತಿಯನ್ನು :-

1. ಕಾರ್ಯದರ್ಶಿ, ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ, ನಂ.1/14, 2 ನೇ ಮಹಡಿ, ಸಿಲ್ವರ್ ಜ್ಯೂಬಿಲಿ ಬ್ಲಾಕ್, ಯುನಿಟಿ ಬಿಲ್ಡಿಂಗ್, ಸಿ.ಎಸ್.ಐ ಕಾಂಪೌಂಡ್, 3 ನೇ ಕ್ರಾಸ್ ಮಿಷನ್ ರಸ್ತೆ, ಬೆಂಗಳೂರು-560027 ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
2. ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಕಲ್ಲುಬಾಳು ಗ್ರಾಮ ಪಂಚಾಯಿತಿರವರಿಗೆ ಅನುಮೋದಿತ ವಸತಿ ಉಪಯೋಗದ "ಅಭಿವೃದ್ಧಿ ಯೋಜನಾ ನಕ್ಷೆ" ಯ 4 ಪ್ರತಿಗಳೊಂದಿಗೆ ಮುಂದಿನ ಕ್ರಮಕ್ಕಾಗಿ ಕಳುಹಿಸಿಕೊಡಲಾಗಿದೆ.
3. ಕಛೇರಿ ಪ್ರತಿ.



Scanned with CamScanner